ಶ್ರೀ ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) ಅವರು : ಮಾನ್ಯ ಅಧ್ಯಕ್ಷರೆ, 2009ನೇ ಸಾಲಿನ ಕರ್ನಾಟಕ ಅರಣ್ಯ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–2)

2. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕ, 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಕಟ್ಟಾಸುಬ್ರಮಣ್ಯ ನಾಯ್ಡು (ಅಬಕಾರಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಸಚಿವರು) ಅವರು : ಮಾನ್ಯ ಅಧ್ಯಕ್ಷರೇ, 2009ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"2009ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ನೀಡುವುದು",

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಕಟ್ಟಾಸುಬ್ರಮಣ್ಯ ನಾಯ್ಡು (ಅಬಕಾರಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಸಚಿವರು) ಅವರು : ಮಾನ್ಯ ಅಧ್ಯಕ್ಷರೇ, 2009ನೇ ಸಾಲಿನ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.